**ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಕೊಪ್ಪ**

**<u>ಸಿ. ಸಿ. ನಂ.566/2023</u>**

**<u>ಪಿರ್ಯಾಧಿದಾರರುಃ</u>** ಶ್ರೀಮತಿ ಕೀರ್ತಿ ಎಸ್.ಬಿ., ಕೋಂ ದೇವರಾಜ ಎಸ್., ವಯಸ್ಸು 30 ವರ್ಷ, ವ್ಯಾಪಾರಿ, ಜೈಲ್ ರಸ್ತೆ, ನರಸಿಂಹರಾಜಪುರ ತಾಲ್ಲೂಕು.

**-ವಿರುದ್ಧ -**

**<u>ಆರೋಪಿಃ</u>** ಶ್ರೀ ಮಂಜುನಾಥ ಬಿನ್ ಅಚ್ಚಣ್ಣಶೆಟ್ಟಿ, ವಯಸ್ಸು 45 ವರ್ಷ, ವಾಸ ಮೀನು ಮಾರ್ಕೇಟ್ ಹತ್ತಿರ, ಹಳೆಪೇಟೆ, ನರಸಿಂಹರಾಜಪುರ ತಾಲ್ಲೂಕು.

**<u>ಆರೋಪಣೆ</u>**

ಆರೋಪಿಯಾದ ನೀವು ನಿಮ್ಮ ತುರ್ತು ಅವಶ್ಯಕತೆಗಾಗಿ ಪಿರ್ಯಾಧಿದಾರರಿಂದ ದಿನಾಂಕ 01.05.2023 ರಂದು ರೂ. 3,00,000/- ಗಳ ಕೈ ಸಾಲವನ್ನು ಪಡೆದುಕೊಂಡಿದ್ದು, ಸದರಿ ಸಾಲವನ್ನು ತೀರುವಳಿ ಮಾಡುವ ಸಲುವಾಗಿ ನೀವು ನಿಮ್ಮ ಬಾಬ್ತು ಅವರಿಗೆ ಚೆಕ್ ನಂ.507730 ದಿನಾಂಕ 16.06.2023 ನ್ನು ನಮೂದಿಸಿದ ಕರ್ನಾಟಕ ಬ್ಯಾಂಕ್ ಲಿಮಿಟೆಡ್, ನರಸಿಂಹರಾಜಪುರ ಶಾಖೆಯ ಒಂದು ಚೆಕ್ಕನ್ನು ನೀಡಿದ್ದು, ಅವರು ಸದರಿ ಚೆಕ್ಕನ್ನು ಕರ್ನಾಟಕ ಬ್ಯಾಂಕ್ ಲಿಮಿಟೆಡ್, ಕುದ್ರೆಗುಂಡಿ ಶಾಖೆಗೆ ಹಾಜರುಪಸಿದಾಗ **"Funds insufficient and drawer's signature is differs"** ಎಂಬ ಹಿಂಬರಹದೊಂದಿಗೆ ನೀವು ಕೊಟ್ಟಂತ ಚೆಕ್ ವಾಪಸ್ಸಾಗಿದ್ದು ಸದರಿ ಚೆಕ್ ಅಮಾನ್ಯಗೊಂಡ ಬಗ್ಗೆ ನಿಮ್ಮ ಗಮನಕ್ಕೆ ದಿನಾಂಕ 28.06.2023 ರಂತೆ ವಕೀಲರ ನೋಟೀಸು ನೀಡಿದ್ದು, ಸದರಿ ನೋಟೀಸು ದಿನಾಂಕ 10.07.2023 ರಂದು ನಿಮಗೆ ಜಾರಿಯಾದೇ ವಾಪಾಸ್ಸಾಗಿದ್ದು, ನೀವು ಚೆಕ್ ಬಾಬ್ತು ಹಣವನ್ನು ನೀಡದೇ ವರ್ಗಾವಣೀಯ ಲಿಖಿತ ಅಧಿನಿಯಮ ಕಲಂ 138 ರ ಅಡಿಯಲ್ಲಿ ಅಪರಾಧವನ್ನು ನನ್ನ ಸಂಜ್ಞೆಯಲ್ಲಿ ಎಸಗಿರುತ್ತೀರಿ.

ಪ್ರಶ್ನೆ 1ಃ- ನಿಮಗೆ ಓದಿ ಹೇಳಿದ ಆರೋಪಣೆ ಅರ್ಥವಾಯಿತೇ?

ಉತ್ತರಃ ತಿಳಿಯಿತು.

ಪ್ರಶ್ನೆ 2ಃ- ಮೇಲಿನ ಆಪಾಧನೆಯನ್ನು ಒಪ್ಪಿಕೊಳ್ಳುತ್ತೀರೋ ಅಥವಾ ವಿಚಾರಣೆಯಾಗಬೇಕೆ?

ಉತ್ತರಃ ವಿಚಾರಣೆಯಾಗಬೇಕು.

ಮೇಲಿನ ಆರೋಪಣೆಯನ್ನು ಆರೋಪಿಗೆ ಓದಿ ಹೇಳಿದ ನಂತರ ಅವರು ನೀಡಿದ ಉತ್ತರವನ್ನು ಸ್ವತಃ ನಾನೇ ಬರೆದುಕೊಂಡಿರುವುದು ನಿಜವೆಂದು ದೃಢೀಕರಿಸುತ್ತೇನೆ.

ಸಹಿ/- 05.07.2025.
(ಎಂ.ಎನ್. ನಂದಿನಿ)
ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದಂ., ಕೊಪ್ಪ